# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 46 ಜೆ.ಸಿ ನಗರ.ಬೆಂಗಳೂರು.**

ಸಂಖ್ಯೆ: ಸ.ಅ/ವಾ-46/ಪಿ.ಆರ್/20 /2022-23 ದಿನಾಂಕ:19-05-2022

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/2020-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ: 17-05-2022 ರಂದು ವಾರ್ಡ್ 46 ಜೆ.ಸಿ ನಗರ ಸಿಟಿಜನ್ ಪಾರ್ಕ್‌ನಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

**::ಸಭೆಗೆ ಹಾಜರಾಗಿದ್ದವರ ವಿವರಗಳು::**

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1. | ಶ್ರೀ. ಭೀಮಾನಾಯ್ಕ್ | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2. | ಶ್ರೀ.ಗಣೇಶ್.ಕೆ.ಎನ್ | ಕಿರಿಯ ಆರೋಗ್ಯ ಪರಿವೀಕ್ಷಕರು, |
| 3. | ಶ್ರೀ. ಕಿರಣ್ ದೊಡ್ಡಮನಿ | ಸಹಾಯಕ ಅಭಿಯಂತರರು |
| 4. | ಶ್ರೀ. ಶಿವಕುಮಾರ್ | ಕಿರಿಯ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 5. | ಶ್ರೀಮತಿ ಸುವರ್ಣದೇವಿ | ವರ್ಕ್ ಇನ್ಸ್‌ಪೆಕ್ಟರ್ ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 6. | ಶ್ರೀಮತಿ ಶ್ರೀದೇವಿ | ವೈಧ್ಯಾಧಿಕಾರಿಗಳು, ವಾರ್ಡ್ ಸಂಖ್ಯೆ-46 |
| 7. | ಶ್ರೀ. ಮೂರ್ತಿ | ಕಂದಾಯ ವಸೂಲಿಗಾರರ |
| 8. | ಶ್ರೀ. ಸತೀಶ್ | ರೆವಿನ್ಯೂ ಇನ್ಸ್‌ಪೆಕ್ಟರ್ |
| 9. | ಶ್ರೀ. ಸ್ವಾಮಿ | ಬೀದಿ ದೀಪ ನಿರ್ವಹಣೆ |
| 10. | ಶ್ರೀ. ಎನ್. ಶಿವಪ್ಪ | ಘನತ್ಯಾಜ್ಯ ಮೇಲ್ವಿಚಾರಕರು |
| 11. | ಶ್ರೀ. ಹರೀಶ್ ರೆಡ್ಡಿ | ಸಾರ್ವಜನಿಕರು |
| 12. | ಶ್ರೀ. ಕಿಶೋರ್ ಶೆಟ್ಟಿ | ಸಾರ್ವಜನಿಕರು |

ವಾರ್ಡ್ ಕಾರ್ಯದರ್ಶಿಗಳಾದ ಶ್ರೀ. ಕಿರಣ್ ದೊಡ್ಡಮನಿ ರವರು ಸಭೆಗೆ ಹಾಜರಾದ ಅಧ್ಯಕ್ಷರು, ಹಾಗೂ ನೋಡಲ್ ಅಧಿಕಾರಿಗಳಾದ ಶ್ರೀ ಭೀಮಾನಾಯ್ಕ್ ರವರಿಗೆ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು. ಹಾಗೂ ಅಧ್ಯಕ್ಷರಿಗೆ ವಾರ್ಡ್ ಸಭೆ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ವಿಸ್ತಾರವಾಗಿ ಮಾತನಾಡಲು ಕೋರಲಾಯಿತು.

1. 15ನೇ ಅಡ್ಡರಸ್ತೆ ಆರ್.ಟಿ ನಗರದಿಂದ ದಿನ್ನೂರಿಗೆ ಸಂಪರ್ಕ ಕಲ್ಪಿಸುವ ರಸ್ತೆಯ ಪಾದಚಾರಿ ಮಾರ್ಗದಲ್ಲಿ ಕವರಿಂಗ್ ಸ್ಲಾಬ್ ಅನ್ನು ಸರಿಪಡಿಸಲು ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.
2. ವಾರ್ಡಿನಲ್ಲಿರುವ ರಾಜಕಾಲುವೆಯ ಹೂಳನ್ನು ತೆಗೆಯಲು ಬೃಹತ್ ಮಳೆನೀರು ಕಾಲುವೆಯ ಅಧಿಕಾರಿಗಳಿಗೆ ಸೂಚಿಸಲಾಯಿತು.
3. ಬಿ.ಡಿ.ಎ ಕಾಂಪ್ಲೆಕ್ಸ್ ರಸ್ತೆ ಮತ್ತು ದಿನ್ನೂರು ಮುಖ್ಯರಸ್ತೆಯಲ್ಲಿ ಸಂಚಾರ ಅಡಚಣೆಯಾಗಿದ್ದು ಸರಿಪಡಿಸಲು ಸಂಚಾರಿ ಪೊಲೀಸ್ ಅಧಿಕಾರಿಗಳಿಗೆ ಸೂಚಿಸಲಾಯಿತು.
4. ಮಾಲ್ಗುಡಿ ಪಾರ್ಕ್ 5ನೇ ಎ ಮುಖ್ಯರಸ್ತೆಯಲ್ಲಿ ಬೀದಿ ದೀಪಗಳನ್ನು ಸುವ್ಯವಸ್ಥೆಯೊಂದಿಗೆ ನಿರ್ವಹಣೆ ಮಾಡಲು ಬೀದಿ ದೀಪಗಳ ನಿರ್ವಹಣೆ ಅಧಿಕಾರಿಗಳಿಗೆ ಸೂಚಿಸಲಾಯಿತು.

Scanned with CamScanner

5. ಆರ್.ಟಿ ನಗರ ಸುತ್ತಮುತ್ತ ಗಸ್ತು ತಿರುಗಲು ಕಾನೂನು ಮತ್ತು ಸುವ್ಯವಸ್ಥೆ ಪೊಲೀಸ್ ಅಧಿಕಾರಿಗಳಿಗೆ ಸೂಚಿಸಲಾಯಿತು.
6. ವಾರ್ಡಿಗೆ ನೀಡಿರುವ ಆಯವ್ಯಯದಲ್ಲಿ ಬಳಸಿರುವ ಕಾಮಗಾರಿಗಳ ಬಗ್ಗೆ ತಿಳಿಸಲು ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.
7. 15ನೇ ಅಡ್ಡರಸ್ತೆ ಆರ್.ಟಿ ನಗರ ದಿಂದ ದಿನ್ನೂರಿಗೆ ಸಂಪರ್ಕ ಕಲ್ಪಿಸುವ ರಸ್ತೆಯನ್ನು ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ಅಗೆದಿದ್ದು, ಅಗೆದಿರುವ ರಸ್ತೆಯನ್ನು ಸರಿಪಡಿಸಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಸೂಚಿಸಲಾಯಿತು.
8. ವಾರ್ಡ್‌ನಲ್ಲಿ ರಸ್ತೆ ಬದಿ ಕಸ ಹಾಕುವವರಿಗೆ ದಂಡ ವಿಧಿಸಿರುವ ವಿವರವನ್ನು ನೀಡುವಂತೆ ಬಿ.ಬಿ.ಎಂ.ಪಿ ಮಾರ್ಷಲ್ ರವರಿಗೆ ಸೂಚಿಸಲಾಯಿತು.

ಈ ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 46 ಜೆ.ಸಿ ನಗರ

21/5/22
ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ: 46 ಜೆ.ಸಿ ನಗರ

ಪ್ರತಿಯನ್ನು:

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರ ಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
3. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
4. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ

Scanned with CamScanner